Starting of new Govt. Junior Colleges in the state

1042(1581)

sri U.B.Banakar (Here Karur)

Will the Hon'bl Minister for primary & Secondary Education be pleased to state

a) Is there any intention to start new Government Junior Colleges by Government During 1998-99 ?

Sri.H.G. Govinda Gowda. (Minister for Primary & Secondary Education.)

a) 'No'

ರಾಜ್ಯದ ಆಯುರ್ವೇದಿಕ್ ಆಸ್ಪತ್ರೆಗಳಲ್ಲಿ ಖಾಲಿಇರುವ ವೈದ್ಯರುಗಳ ಹುದ್ದೆ ಭರ್ತಿ

1044(1576)

ಶ್ರೀ ಜಗದೀಶ ತಿಮ್ಮಣ್ಣಗೌಡ ಪಾಟೀಲ (ಬೀಳಗಿ)

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದ ಅನೇಕ ಆಸ್ಪತ್ರೆಗಳಲ್ಲಿ ಸಾಕಷ್ಟು ಕಡೆ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ರಾಜ್ಯದಲ್ಲಿ ಇರುವ ವೈದ್ಯರ ಒಟ್ಟು ಹುದ್ದೆಗಳೆಷ್ಟು :ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು ? ಖಾಲಿ

ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಇ) ರಾಜ್ಯದ ಆಯುರ್ವೇದಿಕ್ ಆಸ್ಪತ್ರೆಗಳಲ್ಲಿರುವ ವೈದ್ಯರ ಒಟ್ಟು ಸಂಖ್ಯೆ ಎಷ್ಟು ? ಹಾಗೂ ಆ ಪೈಕಿ ಖಾಲಿ ಇರುವ ಒಟ್ಟು ಸಂಖ್ಯೆ ಎಷ್ಟು?

ಈ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮ ಗಳೇನು ?

ಡಾ ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಸಚಿವರು)

ಅ) ಹೌದು.

ಆ) ರಾಜ್ಯದಲ್ಲಿರುವ ಒಟ್ಟು ವೈದ್ಯರ ಹುದ್ದೆಗಳ ಸಂಖ್ಯೆ : 4788.ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ : 739. 573 ವೈದ್ಯರುಗಳನ್ನು ನೇಮಕಾತಿ ಮಾಡುವ ಕಾರ್ಯ ಪ್ರಕ್ರಿಯೆಯಲ್ಲಿದೆ. ಇನ್ನಷ್ಟು ಖಾಲಿ ಹುದ್ದೆಗಳನ್ನು ಸ್ನಾತ್ತಕೋತ್ತರ ವ್ಯಾಸಂಗವನ್ನು ಪೂರೈಸಿ ನೇಮಕಾತಿ ನಿರೀಕ್ಷಣೆಯಲ್ಲಿರುವ ವೈದ್ಯರುಗಳನ್ನು ನೇಮಕ ಮಾಡಿ ಭರ್ತಿ ಮಾಡಲಾಗುವುದು.

ಗ್ರಾಮಾಂತರ ಪ್ರದೇಶಗಳಲ್ಲಿ ಗುತ್ತಿಗೆ ಆಧಾರದಮೇಲೆ ವೈದ್ಯರನ್ನು ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸಂಪೂರ್ಣಅಧಿಕಾರವನ್ನು ನೀಡಲಾಗಿದೆ.

ಇ) ರಾಜ್ಯದಲ್ಲಿರುವ ಆಯುರ್ವೇದ ಆಸ್ಪತ್ರೆಗಳಲ್ಲಿ ಮಂಜೂರಾದ ವೈದ್ಯರ ಸಂಖ್ಯೆ ಸಂ:669

ವಿವರ : ವೈದ್ಯರು ದರ್ಜೆ-1-10

ವೈದ್ಯರು ದರ್ಜೆ-2-659